ಅಧ್ಯಕ್ಷರು : ಸಭೆಯನ್ನು 3-30 ನಿಮಿಷದವರೆಗೂ ಮುಂದೂಡುತ್ತೇನೆ.

(ಸಭೆಯು 1-39 ನಿಮಿಷಕ್ಕೆ ಮುಕ್ತಾಯವಾಗಿ ಮತ್ತೆ 3-30 ಗಂಟೆಗೆ ಸೇರುವುದು.

(ಸಭೆಯು 3-45 ಗಂಟೆಗೆ ಪ್ರಾರಂಭವಾಯಿತು. ಮಾನ್ಯ ಉಪಾಧ್ಯಕ್ಷರು ಅಧ್ಯಕ್ಷ ಪೀಠವನ್ನಲಂಕರಿಸಿದರು.)

ಪ್ರಕಟಣೆ

ಉಪಾಧ್ಯಕ್ಷರು : ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶ ಬಂದಿರುತ್ತದೆ. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯ ವಿಧಾನ ಹಾಗೂ ನಡವಳಿಕೆಯ ನಿಯಮ 118ರ ಮೇರೆಗೆ ವಿಧಾನ ಸಭೆಯಿಂದ ಅಂಗೀಕಾರವಾದ ಈ ಕೆಳಕಂಡ ವಿಧೇಯಕಗಳನ್ನು ಕರ್ನಾಟಕ ವಿಧಾನಪರಿಷತ್ತಿನಲ್ಲಿ ದಿನಾಂಕ 1.3.1996ರಂದು ಅನುಮೋದಿಸಲಾಯಿತೆಂದು ತಿಳಿಸುತ್ತಿದ್ದೇನೆ.

1. ಬೆಂಗಳೂರು ನಗರ ಯೋಜನಾ ಪ್ರದೇಶ ವಲಯ ವಿನಿಮಯ ತಿದ್ದುಪಡಿ ವಿಧೇಯಕ,

2. ಕರ್ನಾಟಕ ತೆರಿಗೆ ಕಾನೂನುಗಳ ತಿದ್ದುಪಡಿ ವಿಧೇಯಕ, 1996.

ಈಗ ಗಮನ ಸೆಳೆಯುವ ಸೂಚನೆ ತೆಗೆದುಕೊಳ್ಳೋಣ.

ಶ್ರೀ ಸಿ.ಆರ್. ಸಗೀರ್ ಅಹಮದ್ : ಮಾನ್ಯ ಅಧ್ಯಕ್ಷರೇ, ನಾನು ತಮ್ಮ ಮುಖಾಂತರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಗಮನವನ್ನು ಸೆಳೆಯುತ್ತಿದ್ದೇನೆ.

ಉಪಾಧ್ಯಕ್ಷರು : ಮಾನ್ಯ ಸಗೀರ್ ಅಹಮದರವರೇ, ಸಂಬಂಧಪಟ್ಟ ಮಂತ್ರಿಗಳು ಇಲ್ಲ, ಆದುದರಿಂದ ಮೊದಲು ನಿಯಮ 351 ತೆಗೆದುಕೊಂಡು ನಂತರ ನಿಮ್ಮ ವಿಚಾರವನ್ನು ತೆಗೆದುಕೊಳ್ಳೋಣ.

ಶ್ರೀ ಜಿ.ವಿ. ಶ್ರೀರಾಮರೆಡ್ಡಿ : ಮಾನ್ಯ ಉಪಾಧ್ಯಕ್ಷರೇ, ಇದಕ್ಕೆ ಸಂಬಂಧಪಟ್ಟ ಮಂತ್ರಿಗಳು ಇಲ್ಲ. ಈ ರೀತಿಯಾಗಿ ಹಲವಾರು ಪ್ರಶ್ನೆಗಳು ಬಂದಮೇಲೆ ನನಗೆ ಮತ್ತೇ ತಾವು ಅವಕಾಶ ಮಾಡಿಕೊಡಬೇಕು.

ಉಪಾಧ್ಯಕ್ಷರು : ನಿಯಮ 351 ಆಗ ತಕ್ಷಣ ನಿಮ್ಮ ವಿಷಯವನ್ನು ತೆಗೆದುಕೊಳ್ಳುತ್ತೇನೆ.

ಶ್ರೀ ಡಿ. ಮಂಜುನಾಥ (ಉನ್ನತ ಶಿಕ್ಷಣ ಸಚಿವರು) : ಮಾನ್ಯ ಉಪಾಧ್ಯಕ್ಷರೇ, ಮಾನ್ಯ ವಿಧಾನ ಸಭಾ ಸದಸ್ಯರಾದ ಸಗೀರ್ ಅಹಮದರವರ ನಿಯಮ 72ರ ಮೇರೆಗೆ ಗಮನ ಸೆಳೆಯುವ ಸೂಚನೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಹೇಳಿಕೆ ಈ ರೀತಿ ಇದೆ. 'ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಯ ವತಿಯಿಂದ ದೇವಗಾನ ಗ್ರಾಮ ಪಂಚಾಯಿತಿಯಲ್ಲಿ ಧ್ವಜ ಹಾರಿಸುವ ಬಗ್ಗೆ ಯಾವುದೇ ಕಡಿವಾಣ ಆದೇಶ ಹೊರಡಿಸಿರುವುದಿಲ್ಲ.

ಶ್ರೀಮತಿ ಪ್ರಮೀಳಾ ನೇಸರ್ಗಿ : ಮಾನ್ಯ ಉಪಾಧ್ಯಕ್ಷರೇ, ಮಾನ್ಯ ಸದಸ್ಯರು ಗಮನವನ್ನು ಸೆಳೆದಿಲ್ಲ.

ಶ್ರೀ ಡಿ. ಮಂಜುನಾಥ್ : ಗಮನ ಸೆಳೆದಿದ್ದಾರೆ.

ಉಪಾಧ್ಯಕ್ಷರು : ಮೊದಲು ಸಂಬಂಧಪಟ್ಟ ಮಂತ್ರಿಗಳ ಗಮನಸೆಳೆದು ನಂತರ ಮಾತನಾಡಬಹುದು.

ಶ್ರೀ ಸಿ.ಆರ್. ಸಗೀರ್ ಅಹಮದ್ : ಮಾನ್ಯ ಉಪಾಧ್ಯಕ್ಷರೇ, ಇದು ಬಹಳ ಗಂಭೀರವಾದಂತಹ ವಿಚಾರವಾಗಿದೆ.

ಉಪಾಧ್ಯಕ್ಷರು : ಸಗೀರ್ ಅಹಮದರವರೇ, ನೀವು ಮಂತ್ರಿಯಾಗಿ ಕೆಲಸ ಮಾಡಿದ್ದೀರಿ. ಮೊದಲು ನೀವು ಗಮನ ಸೆಳೆಯಿರಿ, ಮಂತ್ರಿಯವರು ಸ್ಟೇಟಮೆಂಟ್ ಮಾಡಿದಮೇಲೆ ನೀವು ಕೇಳಿ. ತಾವು ಈಗ ಸಂಬಂಧಪಟ್ಟ ಮಂತ್ರಿಗಳ ಗಮನವನ್ನು ಸೆಳೆಯುತ್ತೇನೆ ಎಂದು ಹೇಳಿ.

ಗಮನ ಸೆಳೆಯುವ ಸೂಚನೆ

(ಅ) ದೇವದಾನ ಗ್ರಾಮ ಪಂಚಾಯತಿಯಲ್ಲಿ ಧ್ವಜ ಹಾರಿಸುವ ಬಗ್ಗೆ.

ಶ್ರೀ ಸಿ.ಆರ್. ಸಗೀರ್ ಅಹಮದ್ (ಚಿಕ್ಕಮಗಳೂರು) : ಮಾನ್ಯ ಉಪಾಧ್ಯಕ್ಷರೇ, ನಾನು ತಮ್ಮ ಮುಖಾಂತರ ನನ್ನ ಕ್ಷೇತ್ರದ ವ್ಯಾಪ್ತಿಯಲ್ಲಿ ಬರುವಂತಹ ಒಂದು ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಈ ರಾಷ್ಟ್ರದ ಧ್ವಜವನ್ನು ಹಾರಿಸುವುದಕ್ಕೆ ಸರ್ಕಾರದ ವತಿಯಿಂದ ಜಿಲ್ಲಾಪಂಚಾಯತ್ ವತಿಯಿಂದ ಕಡಿವಾಣ ಹಾಕಿರುವಂಥಾದ್ದರ ಬಗ್ಗೆ ನಾನು ಸರ್ಕಾರದ ಗಮನವನ್ನು ಸೆಳೆಯುತ್ತೇನೆ.

ಶ್ರೀ ಡಿ. ಮಂಜುನಾಥ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಪರವಾಗಿ) : ಮಾನ್ಯ ಉಪಾಧ್ಯಕ್ಷರೇ, ತಮ್ಮ ಅನುಮತಿಯನ್ನು ಕೋರಿ ಈ ಹೇಳಿಕೆಯನ್ನು ನೀಡಬಯಸುತ್ತೇನೆ.

ಚಿಕ್ಕಮಗಳೂರು ಜಿಲ್ಲಾ ಪಂಚಾಯಿತಿಯ ವತಿಯಿಂದ ದೇವದಾನ ಗ್ರಾಮ ಪಂಚಾಯಿತಿಯಲ್ಲಿ ಧ್ವಜ ಹಾರಿಸುವ ಬಗ್ಗೆ ಯಾವುದೇ ಕಡಿವಾಣ ಆದೇಶ ಹೊರಡಿಸಿರುವುದಿಲ್ಲ.

ಶ್ರೀ ಸಿ.ಆರ್. ಸಗೀರ್ ಅಹಮದ್ : ಮಾನ್ಯ ಉಪಾಧ್ಯಕ್ಷರೇ, ಸರ್ಕಾರ ಹೇಳಿರುವಂತಹ ವಿಚಾರ ಸತ್ಯಕ್ಕೆ ದೂರವಾದುದು. ಇದಕ್ಕೆ ಆಧಾರವನ್ನು ಇಟ್ಟುಕೊಂಡು ನಾನು ಸರ್ಕಾರದ ಗಮನವನ್ನು ಸೆಳೆಯುತ್ತಿದ್ದೇನೆ. ನಾನು ತಮ್ಮ ಮುಖಾಂತರ ಸರ್ಕಾರದ ಗಮನಕ್ಕೆ ತರುವುದೇನೆಂದರೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವಂತಹ ಗ್ರಾಮ ಪಂಚಾಯಿತಿ ಅಧ್ಯಕ್ಷರಿಗೆ ಶಾಲಾ ಶೈಕಣಿಕ ಸಮಿತಿಯ ಅಧ್ಯಕ್ಷರನ್ನಾಗಿ ನೇಮಿಸುವುದಕ್ಕಾಗಿ ಸರ್ಕಾರ ದಿನಾಂಕ 12.2.1994ರಲ್ಲಿ ಒಂದು ಆದೇಶವನ್ನು ಹೊರಡಿಸಿದೆ. ಆನಂತರ 13.7.1995ರಂದು ಮತ್ತೊಂದು ಆದೇಶ ಹೊರಡಿಸಿದೆ. ಮುಖ್ಯ ನಿರ್ವಾಹಕ ಅಧಿಕಾರಿಗಳು, ಉಪನಿರ್ದೇಶಕರು ದಿನಾಂಕ 13.12.1995 ಸಾರ್ವಜನಿಕ ಶಿಕ್ಷಣ ಇಲಾಖೆಯವರಿಗೆ ಒಂದು ಪತ್ರ ಬರೆಯುತ್ತಾರೆ. ಯಾವ್ಯಾವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಗ್ರಾಮ ಪಂಚಾಯಿತಿ